1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಮಳವಳ್ಳಿ

ಸಿ.ಸಿ ನಂ:1291/2015

ಪಿಡಬ್ಲ್ಯೂ 6 ಸಿಡಬ್ಲ್ಯೂ 5

ಸಾಕ್ಷಿಯನ್ನು ತಾ:- 17.06.2025 ರಂದು ಪ್ರಮಾಣ ಮಾಡಿಸಲಾಯಿತು

| | |
|---|---|
| ಸಾಕ್ಷಿದಾರರ ಹೆಸರು | ದೇವರಶೆಟ್ಟಿ |
| ತಂದೆಯ ಹೆಸರು | ಚಿನಗಶೆಟ್ಟಿ |
| ವಯಸ್ಸು | 56 |
| ಉದ್ಯೋಗ | ಭಟ್ಟರು |
| ವಾಸ | ಅಣ್ಣಹಳ್ಳಿ |

ಮುಖ್ಯ ವಿಚಾರಣೆ: ಶ್ರೀ ಸ.ಸ.ಅ ರವರಿಂದ

1. ಈಗ ಒಂದು ದಾಖಲಾತಿ ಸಾಕ್ಷಿಗೆ ತೋರಿಸಲಾಗಿ ಸಾಕ್ಷಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದು ಅಮಾನತು ಮಹಜರ್ ಆಗಿದ್ದು ಅದನ್ನು ಈಗಾಗಲೆ ನಿ.ಪಿ-1 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿ.ಪಿ-1 ಬಿ ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗಳಿಗೆ ನಾನು ಪೊಲೀಸರ ಕೋರಿಕೆ ಮೇರೆಗೆ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಮಹಜರು ಜರುಗಿಸಿ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ. ಈ ಸಂಬಂಧ ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಒಂದು ವರೆ ಅಡಿ ಉದ್ದದ ರಾಡನ್ನು ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಶ್ರೀ ಸ ಸ ಅ ರವರು ಅನುಮತಿಯನ್ನು ಕೋರುತ್ತಾರೆ. ಕಡತವನ್ನು ಪರೀಕ್ಷಿಸಲಾಗಿ ಸಾಕ್ಷಿಯು ಮಹಜರುದಾರನಾಗಿದ್ದು ತನ್ನ ಮಹಜರಿಗೆ ವಿರುದ್ದ ಸಾಕ್ಷ್ಯವನ್ನು ನುಡಿಯುತ್ತಿದ್ದಾರೆ ಆದರಿಂದ ಅವರನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿಯನ್ನು ನೀಡಲಾಯಿತು.)

**ಪಾಟೀಸವಾಲುಃ ಶ್ರೀ ಸ.ಸ.ಅ. ರವರಿಂದಃ**

2. ದಿನಾಂಕ 6.9.2015 ರಂದು ಬೆಳಗ್ಗೆ 8 ಗಂಟೆ ಸಮಯಕ್ಕೆ ನಾನು ಮಳವಳ್ಳಿಗೆ ಬಂದಿದ್ದಾಗ ನನ್ನನ್ನು ಚಾಸ 15 ಠಾಣೆಗೆ ಬರಮಾಡಿಕೊಂಡು ಠಾಣೆ ಬಳಿ ಇದ್ದ 3 ಜನ ಆಸಾಮಿಗಳನ್ನು ತೋರಿಸಿ ಮತ್ತು ಒಂದು ಕೆಎ 02 ಇಎ 6942 ಬೈಕು ಮತ್ತು ಕಬ್ಬಿಣದ ರಾಡನ್ನು ನನಗೆ ತೋರಿಸಿ ಇವುಗಳ ಸಹಾಯದಿಂದ ಆರೋಪಿಗಳು ಕೃತ್ಯಕ್ಕೆ ಬಳಸಿ ವಸ್ತುಗಳನ್ನು ತೋರಿಸಿ ಅಮಾನತು ಕಾಲಕ್ಕೆ ಪಂಚರಾಗಬೇಕೆಂದು ಕೋರಿಕೊಂಡ ಮೇರೆಗೆ ನಾವು ಒಪ್ಪಿದ ಕಾರಣ ನಮ್ಮ ಸಮಕ್ಷಮ 8-8.40 ಕ್ಕೆ ಮಹಜರು ಜರುಗಿಸಿ ಸ್ಕೂಟರು ಮತ್ತು ರಾಡನ್ನು ಅಮಾನತುಪಡಿಸಿಕೊಂಡರು ಎಂದರೆ ಸರಿಯಲ್ಲ.

ಸಾಕ್ಷಿಗೆ ಸದರಿ ಹೇಳಿಕೆಯನ್ನು ಓದಿ ಹೇಳಲಾಗಿ ಸಾಕ್ಷಿ ಒಪ್ಪದ ಹೇಳಿಕೆ ಭಾಗವನ್ನು ನಿಪಿ 3 ಎಂದು ಗುರುತಿಸಲಾಯಿತು. ನಿಪಿ 1 ರ ವಿಚಾರ ಗೊತ್ತಿದ್ದರು ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

3. ನಾವು ಮತ್ತು ಆರೋಪಿಗಳು ರಾಜಿ ಮಾಡಿಕೊಂಡಿದ್ದೇವೆ ಎಂದರೆ ಸರಿ. ನಾನು ಆರೋಪಿಗಳು ರಾಜಿ ಮಾಡಿಕೊಂಡ ಕಾರಣ ಅವರ ಪರವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ- ಆರೋಪಿ ಪರ ವಕೀಲರಿಂದಃ- ಇಲ್ಲ**

(ನನ್ನ ಉಕ್ತಲೇಖನದ ಮೂಲಕ ಸಾಕ್ಷಿಯ ಹೇಳಿಕೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.

1 ನೇ ಅಪರ ಸಿ.ಜೆ. ಮತ್ತು ಜೆ.ಎಂಎಫ್.ಸಿ
ಮಳವಳ್ಳಿ